# ಸಹ್ಯಾದ್ರಿ ಕಾಲೇಜಿನಲ್ಲಿ ಚಾಣಕ್ಯ–2019 ರಸಪ್ರಶ್ನೆ
# ಎನ್‌ಎಂಎಎಂಐಟಿ ತಂಡಕ್ಕೆ ಪ್ರಥಮ ಸ್ಥಾನ

ಮಂಗಳೂರು: ನಗರದ ಹೊರವಲಯದ ಅಡ್ಯಾರ್‌ನಲ್ಲಿರುವ ಸಹ್ಯಾದ್ರಿ ಎಂಜಿನಿಯರಿಂಗ್ ಕಾಲೇಜಿನಲ್ಲಿ ಮಾಹಿತಿ ತಂತ್ರಜ್ಞಾನ ಕ್ಷೇತ್ರಕ್ಕೆ ಸಂಬಂಧಿಸಿದಂತೆ ಶನಿವಾರ ನಡೆದ ಚಾಣಕ್ಯ-2019 ರಾಜ್ಯ ಮಟ್ಟದ ರಸಪ್ರಶ್ನೆ ಸ್ಪರ್ಧೆಯಲ್ಲಿ ನಿಟ್ಟೆ ಮಹಾಲಿಂಗ ಅಡ್ಯಂತಾಯ ಮೆಮೋರಿಯಲ್ ಇನ್‌ಸ್ಟಿಟ್ಯೂಟ್ ಆಫ್ ಟೆಕ್ನಾಲಜಿ (ಎನ್‌ಎಂಎಎಂಐಟಿ) ತಂಡ ಮೊದಲ ಬಹುಮಾನ ಪಡೆದುಕೊಂಡಿದೆ.

ರಾಜ್ಯದ ವಿವಿಧ ಪದವಿ ಕಾಲೇಜುಗಳ 140 ತಂಡಗಳು ಈ ಸ್ಪರ್ಧೆಯಲ್ಲಿ ಪಾಲ್ಗೊಂಡಿದ್ದವು.

ಕ್ವಿಝ್ ಮಾಸ್ಟರ್ ಶೈಲೇಶ್ ಶೆಟ್ಟಿ ಸ್ಪರ್ಧೆ ನಡೆಸಿಕೊಟ್ಟರು. ಎನ್‌ಎಂಎಎಂಐಟಿ ಮತ್ತು ಎ.ಜೆ.ಇನ್‌ಸ್ಟಿಟ್ಯೂಟ್ ಆಫ್ ಎಂಜಿನಿಯರಿಂಗ್ ಅಂಡ್ ಟೆಕ್ನಾಲಜಿಯ ತಲಾ ಒಂದು ತಂಡ ಹಾಗೂ ಸೇಂಟ್ ಅಲೋಶಿಯಸ್ ಕಾಲೇಜು ಮತ್ತು ಸೇಂಟ್ ಜೋಸೆಫ್ ಎಂಜಿನಿಯರಿಂಗ್ ಕಾಲೇಜಿನ ತಲಾ ಎರಡು ತಂಡಗಳು ಫೈನಲ್ ಪ್ರವೇಶಿಸಿದ್ದವು.

ಎನ್‌ಎಂಎಎಂಐಟಿಯ ಶ್ರೀಕೃಷ್ಣ ಮತ್ತು ಪಿ.ವಿ.ಚೇತನ್ ಆಚಾರ್ಯ ಅವರ ತಂಡ ಮೊದಲ ಬಹುಮಾನ ಗೆದ್ದುಕೊಂಡಿತು. ಎ.ಜೆ.ಎಂಜಿನಿಯರಿಂಗ್ ಕಾಲೇಜಿನ ಶಶಾಂಕ್ ಎಸ್. ಮಯ್ಯ ಮತ್ತು ಕೀತ್ ಲೆನ್ನರ್ ವೇಗಸ್ ಅವರ ತಂಡ ದ್ವಿತೀಯ ಸ್ಥಾನ ಪಡೆದರೆ, ಸೇಂಟ್ ಅಲೋಶಿಯಸ್ ಕಾಲೇಜಿನ ಸಿದ್ಧಾರ್ಥ್ ಬಂಗೇರ ಮತ್ತು ಏರೋಲ್ ಫರ್ನಾಂಡಿಸ್ ತಂಡ ಮೂರನೇ ಸ್ಥಾನ ಪಡೆಯಿತು.



ಅಡ್ಯಾರ್‌ನ ಸಹ್ಯಾದ್ರಿ ಎಂಜಿನಿಯರಿಂಗ್ ಕಾಲೇಜಿನಲ್ಲಿ ಶನಿವಾರ ನಡೆದ ಚಾಣಕ್ಯ–2019 ರಸಪ್ರಶ್ನೆ ಸ್ಪರ್ಧೆಯಲ್ಲಿ ವಿಜೇತರಾದ ವಿದ್ಯಾರ್ಥಿಗಳೊಂದಿಗೆ ಆಯೋಜಕರು.